# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಗವಿಸಿದ್ದೇಶ್ವರ ಮಠ ಕೊಪ್ಪಳ ಶ್ರೀ ಮಠದ ಉಚಿತ ವಸತಿ ನಿಲಯ ಮತ್ತು ಪ್ರಸಾದ ನಿಲಯ ಕಟ್ಟಡ ಕಾಮಗಾರಿಗೆ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 469 ವೆಚ್ಚ-3/2022, ದಿನಾಂಕ:01.08.2022.

............

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರಸ್ಥಾನ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ಶ್ರೀ ಗವಿಸಿದ್ದೇಶ್ವರ ಮಠ ಕೊಪ್ಪಳ ಶ್ರೀ ಮಠದ ಉಚಿತ ವಸತಿ ನಿಲಯ ಮತ್ತು ಪ್ರಸಾದ ನಿಲಯ ಕಟ್ಟಡ ಕಾಮಗಾರಿಗೆ ಕೂಡಲೇ ರೂ.10.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಆದೇಶಿಸಿರುತ್ತಾರೆ. ಆದ್ದರಿಂದ ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿರುವಂತೆ ಶ್ರೀ ಗವಿಸಿದ್ದೇಶ್ವರ ಮಠ ಕೊಪ್ಪಳ ಶ್ರೀ ಮಠದ ಉಚಿತ ವಸತಿ ನಿಲಯ ಮತ್ತು ಪ್ರಸಾದ ನಿಲಯ ಕಟ್ಟಡ ಕಾಮಗಾರಿಗೆ 2022-23ನೇ ಸಾಲಿಗೆ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಲಭ್ಯವಿರುವ ಅನುದಾನದಿಂದ ಕೂಡಲೇ ರೂ.10.00 ಕೋಟಿ ಬಿಡುಗಡೆ ಮಾಡುವಂತೆ ಹಾಗೂ ಸದರಿ ಮೊತ್ತವನ್ನು ಪೂರಕ ಅಂದಾಜು-1ರಲ್ಲಿ ಒದಗಿಸಲಾಗುವುದೆಂದು ತಿಳಿಸಲಾಗಿರುತ್ತದೆ.

01/08/22

....2

ಮೇಲೆ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 450 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 01-08-2022**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಗವಿಸಿದ್ದೇಶ್ವರ ಮಠ, ಕೊಪ್ಪಳ, ಶ್ರೀ ಮಠದ ಉಚಿತ ವಸತಿ ನಿಲಯ ಮತ್ತು ಪ್ರಸಾದ ನಿಲಯ ಕಟ್ಟಡ ಕಾಮಗಾರಿಗೆ ರೂ.10.00 ಕೋಟಿ (ಹತ್ತು ಕೋಟಿ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (1) ರ ಮಾರ್ಗಸೂಚಿಗಳ ಷರತ್ತಿನಂತೆ ಸದರಿ ಸಂಸ್ಥೆಯು ಅರ್ಹತೆ ಹೊಂದಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು. ಉಲ್ಲೇಖದಲ್ಲಿ ಓದಲಾದ(1)ರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014ರ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದು. ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಸಂಸ್ಥೆಯು ಮಾರ್ಗಸೂಚಿಗಳನುಸಾರ ಅರ್ಹತೆ ಹೊಂದಿದಲ್ಲಿ ಮಾತ್ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸದರಿ ಸಂಸ್ಥೆಗೆ ಯೋಜನೆಯ ಮಾರ್ಗಸೂಚಿಗಳನುಸಾರ ಈ ಸಂಸ್ಥೆಗೆ ನಿಯಮಾನುಸಾರ ಅರ್ಹತೆಯನುಸಾರ ಅನುದಾನವನ್ನು ಮಾರ್ಗಸೂಚಿಗಳಂತೆ ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಜಿಲ್ಲಾಧಿಕಾರಿಗಳು ಕೊಪ್ಪಳ ಜಿಲ್ಲೆ ಇವರ ಮುಖಾಂತರ ಪಡೆಯತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಪಾರದರ್ಶಕವಾಗಿ ಸದ್ಬಳಕೆ ಆಗುತ್ತಿರುವ ಬಗ್ಗೆ ಹಾಗೂ ಮಾರ್ಗಸೂಚಿಗಳಂತೆ ಪ್ರತಿ ತಿಂಗಳು ಸಂಬಂಧಿತ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಗೆ ನಿಗಧಿತ ನಮೂನೆಯಲ್ಲಿ ವರದಿಯನ್ನು ಪಡೆಯತಕ್ಕದ್ದು, ವರದಿಯ ಆಧಾರದ ಮೇಲೆ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.
4. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಗಳಿಗೆ ನೀಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.
5. ಅನುದಾನವನ್ನು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸಿದ ನಂತರ ಬಿಡುಗಡೆ ಮಾಡುವುದು.

01/08/22

.....3